ಈ ಸಂಜೆ

## ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಪದವಿ ಪ್ರದಾನ ಸಮಾರಂಭ

# ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ವೃತ್ತಿ ಪ್ರೀತಿಸುವ ಗುಣ ಇರಬೇಕು: ವಂಶಿಕೃಷ್ಣ



ಬೆಂಗಳೂರು, ಮೇ 27- ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಸವಾಲುಗಳನ್ನು ಸ್ವೀಕರಿಸುವ ಆತ್ಮವಿಶ್ವಾಸ ಮತ್ತು ವೃತ್ತಿಯನ್ನು ಪ್ರೀತಿಸುವ ಗುಣ ಬೆಳೆಸಿಕೊಂಡಾಗ ಮಾತ್ರ ನಮ್ಮ ಸಾಧನೆಯ ಗುರಿ ಮುಟ್ಟಲು ಸಾಧ್ಯವಾಗುತ್ತದೆ ಎಂದು ವೇದಾಂತು ಸಂಸ್ಥೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಂಶಿಕೃಷ್ಣ ಹೇಳಿದರು.

ನಗರದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ನಡೆದ ಪದವಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಭವಿಷ್ಯದ ಭಾರತವನ್ನು ಸದೃಢವಾಗಿಸಲು ಬೇಕಾದ ಸಮರ್ಥ ವಿದ್ಯಾರ್ಥಿ ಸಮುದಾಯವನ್ನು ರೂಪಿಸುತ್ತಿರುವ ಸಿಎಂಆರ್ ಐಟಿ ಸಾಧನೆಯನ್ನು ಶ್ಲಾಘಿಸಿದರು.

ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ಹಾಗೂ ರಾಜ್ಯಸಭಾ ಮಾಜಿ ಸದಸ್ಯರಾದ ಡಾ.ಕೆ.ಸಿ.ರಾಮಮೂರ್ತಿ ಮಾತನಾಡಿ, ಕಳೆದ ಎರಡು ದಶಕಗಳಿಂದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ ಸುಸಜ್ಜಿತ ಕಲಿಕಾ ವಾತಾವರಣದಲ್ಲಿ ಗುಣಾತ್ಮಕ ಶಿಕ್ಷಣ ಕೊಡುವ ಮೂಲಕ ಸೃಜನಶೀಲ ವಿದ್ಯಾರ್ಥಿಗಳನ್ನು ದೇಶಕ್ಕೆ ಕೊಡುತ್ತ ಬಂದಿದೆ. ಅದರಂತೆ ನಮ್ಮ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ರಾಷ್ಟ್ರ ಅಂತಾರಾಷ್ಟ್ರೀಯ ಮಟ್ಟದಲ್ಲಿ ಉದ್ಯೋಗ ಪಡೆದು, ಉದ್ಯಮಗಳನ್ನು ಸ್ಥಾಪಿಸಿ ಯಶಸ್ವಿಯಾಗಿದ್ದಾರೆ ಎಂದರು.

ಕಲಿಕಾ ಅನುಭವ ಹಂಚಿಕೊಂಡ ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಎಂಜಿನಿಯರಿಂಗ್ ಪದವಿ ಪಡೆದ ನೇಪಾಳದ ವಿದ್ಯಾರ್ಥಿನಿ ತಮನ್ನಾ ಪಠಾಕ್ ಸಿಎಂಆರ್ ಐ.ಟಿ ಕಾಲೇಜು ಗುಣಾತ್ಮಕ ಕಲಿಕಾ ವಾತಾವರಣ ಒದಗಿಸುವುದರ ಜೊತೆಗೆ ನಾಯಕತ್ವ, ತಂತ್ರಜ್ಞಾನ ಕೌಶಲ್ಯದ ಮತ್ತು ಉದ್ಯಮದ ಸವಾಲುಗಳನ್ನು ಎದುರಿಸಲು ಬೇಕಾದ ಸಾಮರ್ಥ್ಯ ರೂಪಿಸುಕೊಳ್ಳುವಲ್ಲಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಶಿಕ್ಷಣ ಸಂಸ್ಥೆಯಾಗಿದೆ ಎಂದರು.

2023-24ನೇ ಶೈಕ್ಷಣಿಕ ವರ್ಷದಲ್ಲಿ ಪದವಿ ಪೂರೈಸಿದ ಎಂಜಿನಿಯರಿಂಗ್ ವಿಭಾಗಗಳ 831 ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರ ಸ್ವೀಕರಿಸಿದರು.

ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಫಲಕ ಮತ್ತು ಪ್ರಮಾಣ ಪತ್ರ ನೀಡಿ ಸನ್ಮಾನಿಸಲಾಯಿತು. ತಮ್ಮ ಮಕ್ಕಳ ಶೈಕ್ಷಣಿಕ ಸಾಧನೆಯನ್ನು ಕಣ್ತುಂಬಿಕೊಂಡ ಪೋಷಕರು ಹರ್ಷೋದ್ಗಾರದಲ್ಲಿ ಸಂಭ್ರಮಿಸಿದರು.

ಸಿಎಂಆರ್ ವಿಶ್ವವಿದ್ಯಾಲಯದ ಅಧ್ಯಕ್ಷರಾದ ಡಾ.ಸಬಿತಾ ರಾಮಮೂರ್ತಿ, ಸಿಎಂಆರ್ ಜ್ಞಾನಾಧಾರ ಟ್ರಸ್ಟ್‌ನ ಟ್ರಸ್ಟಿ ಡಾ.ಕೆ.ಸಿ.ರಾಜುರೆಡ್ಡಿ, ಕಾರ್ಯದರ್ಶಿ ಜಗನ್ನಾಥ ರೆಡ್ಡಿ, ಡಾ.ತ್ರಿಶಾ ರಾಮಮೂರ್ತಿ, ಪ್ರಾಂಶುಪಾಲ ಡಾ.ಸಂಜಯ್ ಜೈನ್, ಉಪಪ್ರಾಂಶುಪಾಲ ಡಾ.ಬಿ.ನರಸಿಂಹಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

Bengaluru Edition
May 27, 2024 Page No. 7
Powered by: erelego.com



ನಗರದ ಐಟಿಪಿಎಲ್ ರಸ್ತೆಯಲ್ಲಿರುವ ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ನಿನ್ನೆ 21ನೇ ಪದವಿ ಪ್ರದಾನ ಸಮಾರಂಭ ಕಾರ್ಯಕ್ರಮ ಜರುಗಿತು. 2023–24ನೇ ಸಾಲಿನಲ್ಲಿ ತೇರ್ಗಡೆಯಾದ 831 ವಿದ್ಯಾರ್ಥಿಗಳಿಗೆ ಮಾಜಿ ರಾಜ್ಯಸಭಾ ಸದಸ್ಯ ಡಾ.ಕೆ.ಸಿ ರಾಮಮೂರ್ತಿ,ಸಿ.ಎಂ.ಆರ್ ವಿಶ್ವವಿದ್ಯಾಲಯದ ಅಧ್ಯಕ್ಷ ಡಾ.ಸಬಿತಾ ರಾಮಮೂರ್ತಿ ಪದವಿ ಪ್ರಮಾಣ ಪತ್ರ ನೀಡಿ ಗೌರವಿಸಿದರು. ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಗೌರವಿಸಿ ಪುರಸ್ಕರಿಸಲಾಯಿತು.

ಸಂಯುಕ್ತ ಕರ್ನಾಟಕ

# ಸಾಧನೆಗೆ ಆತ್ಮವಿಶ್ವಾಸ ಅಗತ್ಯ



ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ 21ನೇ ಪದವಿ ಪ್ರದಾನ ಸಮಾರಂಭದಲ್ಲಿ ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರ ಸ್ವೀಕರಿಸಿದರು.

**ಬೆಂಗಳೂರು:** ವೃತ್ತಿ ಬದುಕಿನಲ್ಲಿ ಎದುರಾಗುವ ಸವಾಲುಗಳನ್ನು ಆತ್ಮವಿಶ್ವಾಸದಿಂದ ಮೆಟ್ಟಿನಿಲ್ಲಬೇಕೆಂದು ವೇದಾಂತು ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಂಶಿಕೃಷ್ಣ ತಿಳಿಸಿದರು.

ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ 21ನೇ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಶೈಕ್ಷಣಿಕ ಹಂತದ ನಂತರ ವೃತ್ತಿಯನ್ನು ಪ್ರೀತಿಸುವ ಗುಣವನ್ನು ಬೆಳೆಸಿಕೊಂಡಾಗ ಮಾತ್ರ ಸಾಧನೆಯ ಗುರಿಮುಟ್ಟಲು ಸಾಧ್ಯ ಎಂದರು. ಇದೇ ಸಂದರ್ಭದಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಎಂಜಿನಿಯರಿಂಗ್ ಪದವಿ ಪಡೆದ ನೇಪಾಳದ ವಿದ್ಯಾರ್ಥಿನಿ ತಮನ್ನಾ ಪತಾಕ್, ಸಿ.ಎಂ.ಆರ್.ಐ.ಟಿ ಕಾಲೇಜು ಗುಣಾತ್ಮಕ ಕಲಿಕಾ ವಾತಾವರಣ ಒದಗಿಸಿಕೊಟ್ಟಿತು. ಜೊತೆಗೆ ನಾಯಕತ್ವ, ತಂತ್ರಜ್ಞಾನ ಕೌಶಲ್ಯದ ಮತ್ತು ಉದ್ಯಮದ ಸವಾಲುಗಳನ್ನು ಎದುರಿಸಲು ಬೇಕಾದ ಸಾಮರ್ಥ್ಯವನ್ನು ರೂಪಿಸಿಕೊಳ್ಳುವಲ್ಲಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಶಿಕ್ಷಣ ಸಂಸ್ಥೆಯಾಗಿದೆ ಎಂದು ಹೇಳಿದರು.

2023–24ನೇ ಶೈಕ್ಷಣಿಕ ವರ್ಷದಲ್ಲಿ ಪದವಿ ಪೂರೈಸಿದ ಎಂಜಿನಿಯರಿಂಗ್ ವಿಭಾಗಗಳ 831 ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರ ಸ್ವೀಕರಿಸಿದರು. ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಕೆ.ಸಿ.ರಾಮಮೂರ್ತಿ, ಸಿ.ಎಂ.ಆರ್ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ.ಸಬಿತಾ ರಾಮಮೂರ್ತಿ ಮತ್ತಿತರರಿದ್ದರು.

Bangalore Edition
May 26, 2024 Page No. 02

# ಘಟಿಕೋತ್ಸವದಲ್ಲಿ ಚರಿಷ್ಮಾಗೆ ಪದವಿ ಪ್ರದಾನ

**ಮುಳಬಾಗಿಲು:** ಬೆಂಗಳೂರು ವೈಟ್‌ಫೀಲ್ಡ್ ಬಳಿಯ ಕುಂದಲಹಳ್ಳಿ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಬಿಇ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ಚರಿಷ್ಮಾ ಅವರಿಗೆ 21ನೇ ಘಟಿಕೋತ್ಸವದಲ್ಲಿ ವೇದಾಂತು ಸಮೂಹ ಶಿಕ್ಷಣ ಸಂಸ್ಥೆಗಳ ಸಿ.ಇ.ಒ. ವಂಶಿಕೃಷ್ಣ, ನಿವೃತ್ತ ಐಪಿಎಸ್ ಅಧಿಕಾರಿ ಡಾ. ಕೆ.ಸಿ. ರಾಮಮೂರ್ತಿ ಪದವಿ ಪ್ರದಾನ ಮಾಡಿದರು. ಸಿಎಂಆರ್ ವಿವಿ ಚಾನ್ಸಲರ್ ಡಾ. ಸಬಿತಾ ರಾಮಮೂರ್ತಿ, ಜ್ಞಾನಧರ ಟ್ರಸ್ಟ್ ಕಾರ್ಯದರ್ಶಿ ಕೆ.ಸಿ. ಜಗನ್ನಾಥ ರೆಡ್ಡಿ, ಸಿಎಂ ಆರ್ ಸಮೂಹ ವಿದ್ಯಾಸಂಸ್ಥೆಗಳ ಸಿಇಒ ಜಯದೀಪ್, ಕೆ.ಆರ್.ರೆಡ್ಡಿ, ಉಪಾಧ್ಯಕ್ಷ ಡಾ.ತ್ರಿಸ್ತಾ ರಾಮಮೂರ್ತಿ, ಪ್ರಾಂಶುಪಾಲರಾದ ಡಾ.ಸಂಜಯ್ ಜೈನ್, ಡಾ.ಬಿ.ನರಸಿಂಹಮೂರ್ತಿ, ವಿಭಾಗದ ಮುಖ್ಯಸ್ಥೆ ಡಾ.ಕೆ.ಚಿತ್ರಾ ಇದ್ದರು. ಚರಿಷ್ಮಾ ಅವರು **ವಿಜಯವಾಣಿ** ಮುಳಬಾಗಿಲು ತಾಲೂಕು ವರದಿಗಾರ ಎ. ಅಪ್ಪಾಜಿ ಗೌಡ ಅವರ ಪುತ್ರಿ.



ಸಿಎಂಆರ್ ವಿವಿ ಘಟಿಕೋತ್ಸವದಲ್ಲಿ ಚರಿಷ್ಮಾ ಅವರಿಗೆ ಗಣ್ಯರಿಂದ ಪದವಿ ಪ್ರದಾನ.

MAGZTER

# ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ: 831 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

■ **ಉದಯವಾಣಿ ಸಮಾಚಾರ**

**ಬೆಂಗಳೂರು:** ನಗರದ ಐಟಿಪಿಎಲ್ ರಸ್ತೆಯಲ್ಲಿರುವ ಪ್ರತಿಷ್ಠಿತ ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಶನಿವಾರ 21ನೇ ಪದವಿ ಪ್ರದಾನ ಸಮಾರಂಭ ಜರುಗಿತು. 2023–24ನೇ ಶೈಕ್ಷಣಿಕ ವರ್ಷದಲ್ಲಿ ಪದವಿ ಪೂರೈಸಿದ ಎಂಜಿನಿಯರಿಂಗ್ ವಿಭಾಗಗಳ 831 ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರ ಸ್ವೀಕರಿಸಿದರು. ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಆದ, ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಫಲಕ ಮತ್ತು ಪ್ರಮಾಣ ಪತ್ರ ನೀಡಿ ಸನ್ಮಾನಿಸಲಾಯಿತು.

ಪ್ರಮಾಣ ಪತ್ರ ನೀಡಿ ಮಾತನಾಡಿದ ವೇದಾಂತು ಸಂಸ್ಥೆಯ ಸಿಇಒ ವಂಶಿಕೃಷ್ಣ ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಸವಾಲುಗಳನ್ನು ಸ್ವೀಕರಿಸುವ ಆತ್ಮವಿಶ್ವಾಸ ಮತ್ತು ವೃತ್ತಿಯನ್ನು ಪ್ರೀತಿಸುವ ಗುಣ ಬೆಳೆಸಿಕೊಂಡಾಗ ಮಾತ್ರ ನಮ್ಮ ಸಾಧನೆಯ ಗುರಿ ಮುಟ್ಟಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಭವಿಷ್ಯದ ಭಾರತವನ್ನು ಸದೃಢವಾಗಿಸಲು ಬೇಕಾದ ಸಮರ್ಥ ವಿದ್ಯಾರ್ಥಿ ಸಮುದಾಯವನ್ನು ರೂಪಿಸುತ್ತಿರುವ ಸಿ.ಎಂ.ಆರ್.ಐ.ಟಿ ಸಾಧನೆಯನ್ನು ಶ್ಲಾಘಿಸಿದರು.

ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಎಂಜಿನಿಯರಿಂಗ್ ಪದವಿ ಪಡೆದ ನೇಪಾಳದ ವಿದ್ಯಾರ್ಥಿನಿ ತಮನ್ನಾ ಪತಾಕ್ ಕಲಿಕಾ ಅನುಭವ ಹಂಚಿಕೊಂಡರು. ಸಿ.ಎಂ. ಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಹಾಗೂ ವಿಶ್ವವಿದ್ಯಾಲಯದ ಅಧ್ಯಕ್ಷ ಡಾ.ಕೆ.ಸಿ.ರಾಮಮೂರ್ತಿ, ಸಿಎಂಆರ್ ಜ್ಞಾನಧಾರ ಟ್ರಸ್ಟ್‌ನ ಅಧ್ಯಕ್ಷೆ ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ.ಸಬಿತಾ ರಾಮಮೂರ್ತಿ, ಸಿಎಂಆರ್ ಜ್ಞಾನಧಾರ ಟ್ರಸ್ಟ್‌ನ ಟ್ರಸ್ಟಿ ಡಾ.ಕೆ.ಸಿ.ರಾಜುರೆಡ್ಡಿ, ಜ್ಞಾನಧಾರ ಟ್ರಸ್ಟ್‌ನ ಕಾರ್ಯದರ್ಶಿ ಜಗನ್ನಾಥ ರೆಡ್ಡಿ, ವಿಶ್ವವಿದ್ಯಾಲಯದ ಪ್ರೊವೊಸ್ಟ್ ಡಾ.ತ್ರಿಸ್ತಾ ರಾಮಮೂರ್ತಿ, ಪ್ರಾಂಶುಪಾಲ ಡಾ.ಸಂಜಯ್ ಜೈನ್, ಉಪಪ್ರಾಂಶುಪಾಲ ಡಾ.ಬಿ.ನರಸಿಂಹಮೂರ್ತಿ ಉಪಸ್ಥಿತರಿದ್ದರು.



ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಎಂಜಿನಿಯರಿಂಗ್ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಪದವಿ ನೀಡಿ ಗೌರವಿಸಲಾಯಿತು.



ಸಿಎಂಆರ್ ತಾಂತ್ರಿಕ ಮಹಾದ್ಯಾಲಯದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ.ಕೆ.ಸಿ ರಾಮಮೂರ್ತಿ, ಸಬಿತಾರಾಮಮೂರ್ತಿ ಇದ್ದರು.

ability, technological innovation, and the digital divide.

## CMRIT Celebrates 21st Graduation Day with 831 Students Graduating in Engineering

CMR Institute of Technology (CMRIT) proudly hosted its 21st Graduation Day ceremony, honoring 831 graduates from the 2023-24 batch who completed their studies in various fields of Engineering. The ceremony celebrated the hard work, dedication, and commitment of the students, faculty, and staff. Among the distinguished graduates, academic toppers and athletes who have achieved admirable accomplishments at the national and international levels were also honored. The event was graced by Mr. Vamsi Krishna, CEO of Vedantu, as chief Guest. In his inspiring address, he congratulated the graduates and encouraged them to pursue challenging problems of the industry.



Dr. K.C. Ramamurthy IPS (Retd), Former Member of Rajya Sabha, CM CMR Group of Institutions and CMR University praised the graduates for their accomplishments and urged them to continue learning and growing in their respective fields. The ceremony was also attended by Dr. Sabitha Ramamurthy, Chancellor of CMR University, Dr.Tristha Ramamurthy, Provost CMR University, Dr. KC Raju Reddy Trustee, Sri KC Jagantha Reddy Secretary Jnanadhara Trust, Dr. Sanjay Jain, Principal of CMRIT, and Dr. B. Narasimha Murthy, VP of CMRIT. CMRIT's 21st Annual Graduation Day was a grand success, celebrating graduates with applause from family and friends.